**All India Radio: Bangalore**
**National Bulletins In Kannada**
**14.08.2025 / 1.10pm**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**14.08.2025 / 1.10pm**
**<><*<><>*><>**

**ಮುಖ್ಯಾಂಶಗಳು**

೧. ೭೯ನೇ ಸ್ವಾತಂತ್ರ್ಯ ದಿನಾಚರಣೆ: ದೆಹಲಿಯ ಕೆಂಪುಕೋಟೆಯಲ್ಲಿ ರಾಷ್ಟ್ರವನ್ನು ಉದ್ದೇಶಿಸಿ ನಾಳೆ ಪ್ರಧಾನಿ ನರೇಂದ್ರ ಮೋದಿ ಭಾಷಣ

೨. ಒಂದು ಸಾವಿರಕ್ಕೂ ಹೆಚ್ಚು ರಕ್ಷಣಾ ಸಿಬ್ಬಂದಿಗೆ ಶೌರ್ಯ ಪ್ರಶಸ್ತಿ, ವಿಶಿಷ್ಟ ಸೇವೆಗಾಗಿ ರಾಷ್ಟ್ರಪತಿಗಳ ಪದಕ

೩. ಇಂದು ವಿಭಜನೆಯ ಕರಾಳ ದಿನ; ದೇಶ ವಿಭಜನೆಯ ಸಮಯದಲ್ಲಿ ಹುತಾತ್ಮರಾದವರ ಸ್ಮರಣೆ

೪. ಮಹಾರಾಜ ಟ್ರೋಫಿ ಕ್ರಿಕೆಟ್ ಪಂದ್ಯಾವಳಿ: ದಿನದ ಮೊದಲ ಪಂದ್ಯದಲ್ಲಿಂದು ಮೈಸೂರು ವಾರಿಯರ್ಸ್ - ಮಂಗಳೂರು ಡ್ರಾಗನ್ಸ್ ಮುಖಾಮುಖಿ

*><><><><><><*

ರಾಷ್ಟ್ರವು ನಾಳೆ ೭೯ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಿದ್ದು, ಪ್ರಧಾನಿ ನರೇಂದ್ರ ಮೋದಿ ಅವರು ದೆಹಲಿಯ ಐತಿಹಾಸಿಕ ಕೆಂಪು ಕೋಟೆಯಿಂದ ಸ್ವಾತಂತ್ರ್ಯ ದಿನಾಚರಣೆಯ ನೇತೃತ್ವ ವಹಿಸಲಿದ್ದಾರೆ. ಪ್ರಧಾನ ಮಂತ್ರಿಗಳು ರಾಷ್ಟ್ರ ಧ್ವಜಾರೋಹಣ ಮಾಡಿ, ರಾಷ್ಟ್ರವನ್ನುದ್ದೇಶಿಸಿ ಮಾತನಾಡಲಿದ್ದಾರೆ. ೨೦೪೭ರ ವೇಳೆಗೆ ಸರ್ಕಾರದ ವಿಕಸಿತ ಭಾರತ್ ದೃಷ್ಟಿಕೋನವನ್ನು ಸಾಕಾರಗೊಳಿಸುವತ್ತ ರಾಷ್ಟ್ರವು ಬೃಹತ್ ಹೆಜ್ಜೆಗಳನ್ನು ಇಡುತ್ತಿರುವುದರಿಂದ, ಈ ವರ್ಷದ ಆಚರಣೆಯ ವಿಷಯ 'ನವ ಭಾರತ'. ಈ ಆಚರಣೆಗಳು ಸಮೃದ್ಧ, ಸುರಕ್ಷಿತ ಮತ್ತು ದಿಟ್ಟ ನವ ಭಾರತದ ನಿರಂತರ ಉದಯವನ್ನು ಸ್ಮರಿಸಲು ಮತ್ತು ಪ್ರಗತಿಯ ಹಾದಿಯಲ್ಲಿ ಮತ್ತಷ್ಟು ಮುನ್ನಡೆಯಲು ನವೀಕೃತ ಶಕ್ತಿಯನ್ನು ಒದಗಿಸಲು ವೇದಿಕೆಯಾಗಿ ಕಾರ್ಯನಿರ್ವಹಿಸುತ್ತವೆ. ಈ ವರ್ಷದ ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ಆಪರೇಷನ್ ಸಿಂದೂರದ ಯಶಸ್ಸನ್ನು ಆಚರಿಸಲಾಗುತ್ತದೆ. ಆಮಂತ್ರಣ ಪತ್ರಗಳಲ್ಲಿ ಆಪರೇಷನ್ ಸಿಂದೂರ್ ಲಾಂಛನ ಹಾಗೂ ಚೆನಾಬ್ ಸೇತುವೆಯ ನೀರಿನ ಗುರುತು ಇದೆ. ಈ ವರ್ಷ ಕೆಂಪು ಕೋಟೆಯಲ್ಲಿ ನಡೆಯುವ ಆಚರಣೆಗಳನ್ನು ವೀಕ್ಷಿಸಲು ವಿವಿಧ ಕ್ಷೇತ್ರಗಳ ಸುಮಾರು ಐದು ಸಾವಿರ ವಿಶೇಷ ಅತಿಥಿಗಳನ್ನು ಆಹ್ವಾನಿಸಲಾಗಿದೆ. ಇದರಲ್ಲಿ ೨೦೨೪ ರ ವಿಶೇಷ ಒಲಿಂಪಿಕ್ಸ್‌ನ ಭಾರತೀಯ ತಂಡ, ಅಂತಾರಾಷ್ಟ್ರೀಯ ಕ್ರೀಡಾಕೂಟಗಳ ವಿಜೇತರು ಮತ್ತು ಖೇಲೋ ಇಂಡಿಯಾ ಪ್ಯಾರಾ ಗೇಮ್ಸ್‌ನ ಚಿನ್ನದ ಪದಕ ವಿಜೇತರು ಸೇರಿದ್ದಾರೆ. ನಾಗರಿಕರಲ್ಲಿ ದೇಶಭಕ್ತಿಯ ಉತ್ಸಾಹವನ್ನು ಉತ್ತೇಜಿಸಲು ಮತ್ತು ಆಪರೇಷನ್ ಸಿಂದೂರ್‌ನ ವಿಜಯವನ್ನು ಆಚರಿಸಲು, ಸ್ವಾತಂತ್ರ್ಯ ದಿನಾಚರಣೆಯ ಸಂಜೆ ಮೊದಲ ಬಾರಿಗೆ ದೇಶಾದ್ಯಂತ ಹಲವಾರು ಬ್ಯಾಂಡ್ ಪ್ರದರ್ಶನಗಳನ್ನು ಏರ್ಪಡಿಸಲಾಗಿದೆ. ದೇಶಾದ್ಯಂತ ೧೪೦ ಕ್ಕೂ ಹೆಚ್ಚು ಪ್ರಮುಖ ಸ್ಥಳಗಳಲ್ಲಿ ಸೇನೆ, ನೌಕಾಪಡೆ, ವಾಯುಪಡೆ, ಭಾರತೀಯ ಕೋಸ್ಟ್ ಗಾರ್ಡ್, ಎನ್‌ಸಿಸಿ, ಸಿಆರ್‌ಪಿಎಫ್, ಐಟಿಬಿಪಿ, ಸಿಐಎಸ್‌ಎಫ್, ಎಸ್‌ಎಸ್‌ಬಿ, ಬಿಎಸ್‌ಎಫ್, ಐಡಿಎಸ್, ಆರ್‌ಪಿಎಫ್ ಮತ್ತು ಅಸ್ಸಾಂ ರೈಫಲ್ಸ್‌ನ ಬ್ಯಾಂಡ್‌ಗಳು ಪ್ರದರ್ಶನಗಳನ್ನು ನೀಡಲಿವೆ. ಸ್ವಾತಂತ್ರ್ಯ ದಿನದಂದು ಸಂಪೂರ್ಣ ಭದ್ರತೆ ಖಚಿತಪಡಿಸಿಕೊಳ್ಳಲು, ದೆಹಲಿಯಲ್ಲಿ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗಿದೆ. ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳಲು ಅರೆಸೇನಾ ಪಡೆಗಳು, ಕಮಾಂಡೋಗಳು ಸೇರಿದಂತೆ ಸಾವಿರಾರು ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಸ್ವಾತಂತ್ರ್ಯ ದಿನಾಚರಣೆಯನ್ನು ಉತ್ಸಾಹ ಮತ್ತು ದೇಶಭಕ್ತಿಯಿಂದ ಆಚರಿಸಲು ದೇಶಾದ್ಯಂತ ಜನರು ಸಜ್ಜಾಗುತ್ತಿದ್ದಾರೆ. ಸ್ವಾತಂತ್ರ್ಯ ದಿನಾಚರಣೆಗೆ ಪೂರ್ವಭಾವಿಯಾಗಿ, ದೇಶಾದ್ಯಂತ ಜನರು, 'ಹರ್ ಘರ್ ತಿರಂಗಾ' ಅಭಿಯಾನದಲ್ಲಿ

ಸಕ್ರಿಯವಾಗಿ ಭಾಗವಹಿಸುತ್ತಿದ್ದಾರೆ. ಈ ಅಭಿಯಾನದ ಭಾಗವಾಗಿ ದೇಶದೆಲ್ಲೆಡೇ ದೇಶಭಕ್ತಿ ಸಾರುವ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

*><><><><><><*

೭೯ನೇ ಸ್ವಾತಂತ್ರ್ಯ ದಿನಾಚರಣೆಯ ಮುನ್ನಾ ದಿನವಾದ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ರಾಷ್ಟ್ರವನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಈ ಭಾಷಣವು ಇಂದು ಸಂಜೆ ೭ ಗಂಟೆಯಿಂದ ಆಕಾಶವಾಣಿಯ ರಾಷ್ಟ್ರೀಯ ಜಾಲದಲ್ಲಿ ಪ್ರಸಾರವಾಗಲಿದೆ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳಲ್ಲಿ ಹಿಂದಿಯಲ್ಲಿ ಪ್ರಸಾರವಾಗಲಿದೆ. ನಂತರ ಇಂಗ್ಲಿಷ್ ಆವೃತ್ತಿಯನ್ನು ಪ್ರಸಾರ ಮಾಡಲಾಗುತ್ತದೆ. ದೂರದರ್ಶನದಲ್ಲಿ ಹಿಂದಿ ಮತ್ತು ಇಂಗ್ಲಿಷ್‌ನಲ್ಲಿ ಭಾಷಣದ ಪ್ರಸಾರದ ನಂತರ ದೂರದರ್ಶನದ ಪ್ರಾದೇಶಿಕ ವಾಹಿನಿಗಳು, ಪ್ರಾದೇಶಿಕ ಭಾಷೆಗಳಲ್ಲಿ ಪ್ರಸಾರ ಮಾಡುತ್ತವೆ. ಆಕಾಶವಾಣಿಯು ಇಂದು ರಾತ್ರಿ ೯:೩೦ಕ್ಕೆ ಪ್ರಾದೇಶಿಕ ಭಾಷಾ ಆವೃತ್ತಿಗಳನ್ನು ಆಯಾ ಪ್ರಾದೇಶಿಕ ಜಾಲತಾಣಗಳಲ್ಲಿ ಪ್ರಸಾರ ಮಾಡಲಿದೆ.

*><><><><><><*

ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ಪೊಲೀಸ್, ಅಗ್ನಿಶಾಮಕ ಸೇವೆಗಳು, ಗೃಹರಕ್ಷಕ ದಳ ಮತ್ತು ನಾಗರಿಕ ರಕ್ಷಣಾ ಸೇವೆಗಳಲ್ಲಿ ಪದಕಗಳನ್ನು ಪಡೆದವರ ಅಧಿಕೃತ ಪಟ್ಟಿಯನ್ನು ಕೇಂದ್ರ ಗೃಹ ಸಚಿವಾಲಯ ಪ್ರಕಟಿಸಿದೆ. ಈ ಗೌರವಗಳಲ್ಲಿ ಶೌರ್ಯ ಪ್ರಶಸ್ತಿ, ವಿಶಿಷ್ಟ ಸೇವೆಗಾಗಿ ರಾಷ್ಟ್ರಪತಿಗಳ ಪದಕ ಮತ್ತು ಪ್ರತಿಭಾನ್ವಿತ ಸೇವೆಗಾಗಿ ಪದಕ ಸೇರಿವೆ. ಈ ವರ್ಷ, ಒಟ್ಟು ೧ ಸಾವಿರದ ೯೦ ಪದಕಗಳನ್ನು ನೀಡಲಾಗುವುದು. ಇದರಲ್ಲಿ ೨೩೩ ಶೌರ್ಯ ಪದಕ, ೯೯ ವಿಶಿಷ್ಟ ಸೇವೆಗಾಗಿ ರಾಷ್ಟ್ರಪತಿಗಳ ಪದಕ ಮತ್ತು ೭೫೮ ಪ್ರತಿಭಾನ್ವಿತ ಸೇವೆಗಾಗಿ ಪದಕಗಳು ಸೇರಿವೆ. ಪೊಲೀಸ್ ವಿಭಾಗದಲ್ಲಿ, ೨೨೬ ಅಧಿಕಾರಿಗಳು ಮತ್ತು ಸಿಬ್ಬಂದಿ ಶೌರ್ಯ ಪದಕಕ್ಕೆ ಆಯ್ಕೆಯಾಗಿದ್ದು, ೮೯ ಸಿಬ್ಬಂದಿಗೆ ವಿಶಿಷ್ಟ ಸೇವೆಗಾಗಿ ರಾಷ್ಟ್ರಪತಿಗಳ ಪದಕವನ್ನು ನೀಡಲಾಗುವುದು ಮತ್ತು ೬೩೫ ಸಿಬ್ಬಂದಿಗೆ ಪ್ರತಿಭಾನ್ವಿತ ಸೇವೆಗಾಗಿ ಪದಕವನ್ನು ನೀಡಲಾಗುವುದು. ಜಮ್ಮು ಮತ್ತು ಕಾಶ್ಮೀರದ ಸಿಬ್ಬಂದಿಗೆ ಅತಿ ಹೆಚ್ಚು ಶೌರ್ಯ ಪದಕಗಳು ಬಂದಿವೆ. ನಂತರ ಕ್ರಮವಾಗಿ ಕೇಂದ್ರ ಮೀಸಲು ಪೊಲೀಸ್ ಪಡೆ ಮತ್ತು ಗಡಿ ಭದ್ರತಾ ಪಡೆ ಸಿಬ್ಬಂದಿ ಇದ್ದಾರೆ.

*><><><><><><*

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ರಾಷ್ಟ್ರಪತಿ ಭವನದಲ್ಲಿ ಅಮೃತ್ ಉದ್ಯಾನ ವನದ ವಾರ್ಷಿಕ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಶನಿವಾರದಿಂದ ಸೆಪ್ಟೆಂಬರ್ ೧೪ ರವರೆಗೆ ಪ್ರತಿದಿನ ಬೆಳಗ್ಗೆ ೧೦ ರಿಂದ ಸಂಜೆ ೬ ರವರೆಗೆ ಇದು ಸಾರ್ವಜನಿಕರಿಗೆ ಮುಕ್ತವಾಗಿರಲಿದೆ. ರಾಷ್ಟ್ರೀಯ ಕ್ರೀಡಾ ದಿನವಾದ ಇದೇ ೨೯ ರಂದು ಕ್ರೀಡಾಪಟುಗಳಿಗೆ ಹಾಗೂ ಸೆಪ್ಟೆಂಬರ್ ೫ ರ ಶಿಕ್ಷಕರ ದಿನದಂದು ಶಿಕ್ಷಕರಿಗೆ ಅಮೃತ್ ಉದ್ಯಾನಕ್ಕೆ ವಿಶೇಷ ಪ್ರವೇಶದ ವ್ಯವಸ್ಥೆ ಮಾಡಲಾಗಿದೆ. ಸಾರ್ವಜನಿಕರಿಗೆ ಅಮೃತ್ ಉದ್ಯಾನಕ್ಕೆ ಉಚಿತ ಪ್ರವೇಶವಿರಲಿದ್ದು, ಉದ್ಯಾನ ನಿರ್ವಹಣೆಗಾಗಿ ಎಲ್ಲಾ ಸೋಮವಾರಗಳಂದು ಉದ್ಯಾನವನಕ್ಕೆ ಪ್ರವೇಶ ಇರುವುದಿಲ್ಲ.

*><><><><><><*

ಇಂದು ವಿಭಜನೆಯ ಕರಾಳ ದಿನ. ಇದು ೧೯೪೭ ರ ಭಾರತ ವಿಭಜನೆಯ ಸಮಯದಲ್ಲಿ ಹುತಾತ್ಮರಾದವರು ಮತ್ತು ಜನರ ನೋವುಗಳನ್ನು ಸ್ಮರಿಸುತ್ತದೆ. ಈ ದಿನ ೧೯೪೭ ರ ದೇಶ ವಿಭಜನೆಯ ಸಮಯದಲ್ಲಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ ಮತ್ತು ಊಹಿಸಲಾಗದ ನೋವನ್ನು ಅನುಭವಿಸಿದ ಎಲ್ಲರಿಗೂ ರಾಷ್ಟ್ರ ಗೌರವ ಸಲ್ಲಿಸುತ್ತದೆ. ರಾಷ್ಟ್ರ ವಿಭಜನೆಯಿಂದ ಪ್ರಾಣ ಕಳೆದುಕೊಂಡ ಮತ್ತು ತಮ್ಮ ಮೂಲ ನೆಲೆಗಳಿಂದ ಸ್ಥಳಾಂತರಗೊಂಡ ಎಲ್ಲರಿಗೂ ಸೂಕ್ತವಾದ ಗೌರವವಾಗಿ, ೨೦೨೧ ರಲ್ಲಿ, ಕೇಂದ್ರ ಸರ್ಕಾರವು ಪ್ರತಿ ವರ್ಷ ಆಗಸ್ಟ್ ೧೪ ಅನ್ನು ಅವರ ತ್ಯಾಗವನ್ನು ಸ್ಮರಿಸುವ ದಿನವಾಗಿ ಆಚರಿಸಲು ನಿರ್ಧರಿಸಿತ್ತು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ, ನಮ್ಮ ಇತಿಹಾಸದ ಆ

ದುರಂತ ಅಧ್ಯಾಯದಲ್ಲಿ ಅಸಂಖ್ಯಾತ ಜನರು ಅನುಭವಿಸಿದ ನೋವನ್ನು ಈ ದಿನ ನೆನಪಿಸುತ್ತದೆ ಎಂದು ಹೇಳಿದ್ದಾರೆ. ಈ ದಿನ ಅವರ ಧೈರ್ಯ, ಊಹಿಸಲಾಗದ ನಷ್ಟವನ್ನು ಎದುರಿಸುವ ಮತ್ತು ಇನ್ನೂ ಹೊಸದಾಗಿ ಪ್ರಾರಂಭಿಸುವ ಶಕ್ತಿಯನ್ನು ಕಂಡುಕೊಳ್ಳುವ ಸಾಮರ್ಥ್ಯವನ್ನು ಗೌರವಿಸುತ್ತದೆ. ದೇಶವನ್ನು ಒಟ್ಟಿಗೆ ಹಿಡಿದಿಟ್ಟುಕೊಳ್ಳುವ ಸಾಮರಸ್ಯದ ಬಂಧಗಳನ್ನು ಬಲಪಡಿಸುವ ನಮ್ಮ ನಿರಂತರ ಜವಾಬ್ದಾರಿಯನ್ನು ಈ ದಿನ ನೆನಪಿಸುತ್ತದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

*><><><><><><*

ಬಿಹಾರದಲ್ಲಿ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಹಕ್ಕು ಮತ್ತು ಆಕ್ಷೇಪಣೆಗಳ ಅವಧಿ ಆರಂಭವಾಗಿ ೧೪ ದಿನಗಳು ಕಳೆದರೂ, ಯಾವುದೇ ರಾಜಕೀಯ ಪಕ್ಷವು ಇಲ್ಲಿಯವರೆಗೆ ಒಂದೇ ಒಂದು ಹಕ್ಕು ಅಥವಾ ಆಕ್ಷೇಪಣೆಯನ್ನು ಸಲ್ಲಿಸಿಲ್ಲ ಎಂದು ಭಾರತೀಯ ಚುನಾವಣಾ ಆಯೋಗ ಇಂದು ತಿಳಿಸಿದೆ. ಇನ್ನೊಂದೆಡೆ, ಕರಡು ಪಟ್ಟಿಗೆ ಸಂಬಂಧಿಸಿದಂತೆ ೨೩ ಸಾವಿರದ ೫೫೭ ಹಕ್ಕು ಮತ್ತು ಆಕ್ಷೇಪಣೆಗಳನ್ನು ಮತದಾರರಿಂದ ನೇರವಾಗಿ ಸ್ವೀಕರಿಸಲಾಗಿದೆ ಎಂದು ಆಯೋಗ ಹೇಳಿದೆ.

*><><><><><><*

ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಆಯೋಜಿಸಿರುವ ಮಹಾರಾಜ ಟ್ರೋಫಿ ಕ್ರಿಕೆಟ್ ಪಂದ್ಯಾವಳಿಯ ನಾಲ್ಕನೇ ದಿನವಾದ ಇಂದು ಮೈಸೂರಿನ ಮಾನಸ ಗಂಗೋತ್ರಿಯ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಕ್ರೀಡಾಂಗಣದಲ್ಲಿ ನಡೆಯುವ ದಿನದ ಮೊದಲ ಪಂದ್ಯದಲ್ಲಿ ಮೈಸೂರು ವಾರಿಯರ್ಸ್ ಮತ್ತು ಮಂಗಳೂರು ಡ್ರಾಗನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩:೧೫ಕ್ಕೆ ಆರಂಭವಾಗಲಿದೆ. ಇದೇ ಕ್ರೀಡಾಂಗಣದಲ್ಲಿ ನಡೆಯುವ ದಿನದ ಎರಡನೇ ಪಂದ್ಯದಲ್ಲಿ ಗುಲ್ಬರ್ಗ ಮಿಸ್ಟಿಕ್ಸ್ ಮತ್ತು ಬೆಂಗಳೂರು ಬ್ಲಾಸ್ಟರ್ಸ್ ತಂಡಗಳು ಸೆಣಸಾಟ ನಡೆಸಲಿವೆ. ಪಂದ್ಯ ಸಂಜೆ ೭.೧೫ಕ್ಕೆ ಆರಂಭವಾಗಲಿದೆ.

*><><><><><><*

ಈ ವರ್ಷದ ಏಪ್ರಿಲ್-ಜೂನ್ ಅವಧಿಯಲ್ಲಿ ಹಣದುಬ್ಬರ ಇಳಿಕೆ ಮತ್ತು ಅನುಕೂಲಕರ ಮುಂಗಾರು, ಭಾರತದಲ್ಲಿ ಗ್ರಾಮೀಣ ಬೇಡಿಕೆಯನ್ನು ಹೆಚ್ಚಿಸಿದೆ. ಇದು ನಗರ ಬಳಕೆಯನ್ನು ಮತ್ತೊಮ್ಮೆ ಮೀರಿಸಿದೆ ಎಂದು ಜಾಗತಿಕ ಸಂಶೋಧನಾ ಸಂಸ್ಥೆ - ನೀಲ್ಸನ್ ಐಕ್ಯೂ ವರದಿ ತಿಳಿಸಿದೆ. ನಗರ ಪ್ರದೇಶಗಳು, ವಿಶೇಷವಾಗಿ ಸಣ್ಣ ಪಟ್ಟಣಗಳಲ್ಲಿ ಚೇತರಿಕೆಯ ಲಕ್ಷಣಗಳನ್ನು ತೋರಿಸಿದ್ದರಿಂದ, ಗ್ರಾಮೀಣ ಮಾರುಕಟ್ಟೆಗಳು ನಗರಗಳಿಗಿಂತ ಎರಡು ಪಟ್ಟು ವೇಗವಾಗಿ ಬೆಳೆದಿವೆ. ವಿಶೇಷವಾಗಿ ಮನೆ ಮತ್ತು ವೈಯಕ್ತಿಕ ಆರೈಕೆಯಲ್ಲಿ ಖರೀದಿದಾರರ ಖರ್ಚು ಹೆಚ್ಚಳದಿಂದಾಗಿ ಇ-ಕಾಮರ್ಸ್ ಕೂಡ ಗಮನಾರ್ಹವಾಗಿ ಏರಿಕೆಯಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.

*><><><><><><*

ಯೆಮೆನ್‌ನಲ್ಲಿ ಮರಣದಂಡನೆ ಶಿಕ್ಷೆಗೆ ಗುರಿಯಾಗಿರುವ ಭಾರತೀಯ ನರ್ಸ್ ನಿಮಿಷಾ ಪ್ರಿಯಾ ಪ್ರಕರಣದಲ್ಲಿ ತುರ್ತು ಹಸ್ತಕ್ಷೇಪ ಕೋರಿ ಸಲ್ಲಿಸಲಾದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಇಂದು ವಿಚಾರಣೆ ನಡೆಸಲಿದೆ. ಪ್ರಕರಣವನ್ನು ನ್ಯಾಯಮೂರ್ತಿ ವಿಕ್ರಮ್ ನಾಥ್ ಮತ್ತು ನ್ಯಾಯಮೂರ್ತಿ ಸಂದೀಪ್ ಮೆಹ್ತಾ ಅವರನ್ನೊಳಗೊಂಡ ನ್ಯಾಯಪೀಠ ಕೈಗೆತ್ತಿಕೊಳ್ಳಲಿದೆ. ೨೦೧೭ ರಲ್ಲಿ ಯೆಮೆನ್ ಪ್ರಜೆಯ ಕೊಲೆ ಮಾಡಿದ ಆರೋಪದಲ್ಲಿ ಕೇರಳ ಮೂಲದ ನಿಮಿಷಾ ಪ್ರಿಯಾ ಅವರನ್ನು ಯೆಮೆನ್ ನ್ಯಾಯಾಲಯ ಶಿಕ್ಷೆ ವಿಧಿಸಿದೆ.

*><><><><><><*